# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 353 |
| ಉತ್ತರಿಸಬೇಕಾದ ದಿನಾಂಕ | : 19.08.2026 |
| ಸದಸ್ಯರ ಹೆಸರು | : ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಉಪ ಮುಖ್ಯಮಂತ್ರಿಯವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಜಾಗತಿಕ ಕ್ರೀಡಾ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ(AI), ಬಯೋಮೆಕಾನಿಕ್ಸ್ ಮತ್ತು ಡೇಟಾ ಅನಾಲಿಟಿಕ್ಸ್‌ನಂತಹ ಆಧುನಿಕ ತಂತ್ರಜ್ಞಾನಗಳು ಅಥ್ಲೀಟ್ ಗಳ ಕೌಶಲ್ಯ ಹಾಗೂ ಸಾಧನೆಯನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ | ಕ್ರೀಡಾ ಸಾಮಗ್ರಿಗಳ ಆವಿಷ್ಕಾರ (ಸ್ಮಾರ್ಟ್ ಶೂಗಳು, ಸುಧಾರಿತ ಟ್ರ್ಯಾಕಿಂಗ್ ಉಪಕರಣಗಳು) ಕ್ರೀಡಾಪಟುಗಳ ನೈಸರ್ಗಿಕ ಶ್ರಮ ಮತ್ತು ತಂತ್ರಜ್ಞಾನದ ನಡುವಿನ ಅಂತರವನ್ನು ಹೆಚ್ಚಿಸುತ್ತಿದ್ದು, ರಾಜ್ಯದ ಗ್ರಾಮೀಣ ಹಾಗೂ ಬಡ ಕ್ರೀಡಾಪಟುಗಳಿಗೆ ಇಂತಹ ತಂತ್ರಜ್ಞಾನ ಆಧಾರಿತ ಉಪಕರಣಗಳು ಸಿಗದೆ ವಂಚಿತರಾಗುತ್ತಿರುವುದನ್ನು ತಡೆಯಲು ಸರ್ಕಾರದ ಮುಂದೆ ಇರುವ ಯೋಜನೆಗಳೇನು; | ಕ್ರೀಡಾ ಸಾಮಗ್ರಿಗಳ ಆವಿಷ್ಕಾರ (ಸ್ಮಾರ್ಟ್ ಶೂಗಳು, ಸುಧಾರಿತ ಟ್ರ್ಯಾಕಿಂಗ್ ಉಪಕರಣಗಳು) ಕ್ರೀಡಾಪಟುಗಳ ನೈಸರ್ಗಿಕ ಶ್ರಮ ಮತ್ತು ತಂತ್ರಜ್ಞಾನದ ನಡುವಿನ ಅಂತರವನ್ನು ಹೆಚ್ಚಿಸುತ್ತಿದ್ದು, ರಾಜ್ಯದ ಗ್ರಾಮೀಣ ಹಾಗೂ ಬಡ ಕ್ರೀಡಾಪಟುಗಳಿಗೆ ಇಂತಹ ತಂತ್ರಜ್ಞಾನ ಆಧಾರಿತ ಉಪಕರಣಗಳು ಸಿಗದೆ ವಂಚಿತರಾಗುತ್ತಿರುವುದನ್ನು ತಡೆಯಲು ಸರ್ಕಾರ ಕೆಳಕಂಡಂತೆ ಕ್ರಮವಹಿಸಿದೆ:<br><br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದ ಗ್ರಾಮೀಣ ಹಾಗೂ ಬಡ ಕ್ರೀಡಾಪಟುಗಳಿಗೆ ತಂತ್ರಜ್ಞಾನ ಆಧಾರಿತ ಉಪಕರಣಗಳು ಸಿಗದೆ ವಂಚಿತರಾಗುತ್ತಿರುವುದನ್ನು ತಡೆಗಟ್ಟಲು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ 2020ನೇ ಸಾಲಿನಿಂದ ಕ್ರೀಡಾ ವಿಜ್ಞಾನ ಕೇಂದ್ರವನ್ನು ಆರಂಭಿಸಿದೆ.<br>2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:399 ರಲ್ಲಿ ಘೋಷಿಸಿರುವಂತೆ ಮೈಸೂರಿನಲ್ಲಿ ಕ್ರೀಡಾ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಿದೆ.<br>ಬೆಳಗಾವಿ ಜಿಲ್ಲೆಯಲ್ಲಿ ಕ್ರೀಡಾ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ಕ್ರಮವಹಿಸಲಾಗಿದೆ.<br>2026-27ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-401ರಲ್ಲಿ ಘೋಷಿಸಿರುವಂತೆ ಕಲ್ಯಾಣ ಕರ್ನಾಟಕ ಭಾಗದ ಕ್ರೀಡಾಪಟುಗಳಿಗೆ ಉತ್ತಮ ಕ್ರೀಡಾ ವಿಜ್ಞಾನ ಸೇವೆಗಳನ್ನು ಒದಗಿಸಲು ಕಲಬುರಗಿಯಲ್ಲಿ ಆಧುನಿಕ ಕ್ರೀಡಾ ವಿಜ್ಞಾನ |

| | | |
|---|---|---|
| | | ಕೇಂದ್ರವನ್ನು ಸಾರ್ವಜನಿಕ- ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲು ಕ್ರಮವಹಿಸಲಾಗುತ್ತಿದೆ.<br>ಸದರಿ ಕ್ರೀಡಾ ವಿಜ್ಞಾನ ಕೇಂದ್ರಗಳಲ್ಲಿ ಎಲ್ಲಾ ಆಧುನಿಕ ಮಾದರಿಯ ಪರೀಕ್ಷೆ, ಟ್ರ್ಯಾಕಿಂಗ್ ಸೌಲಭ್ಯ ಹಾಗೂ ಪರಿಣತರ ಸಲಹಾ ಸೇವಾ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. |
| ಇ | ರಾಜ್ಯದ ಕ್ರೀಡಾ ಅಕಾಡೆಮಿಗಳು ಹಾಗೂ ಕ್ರೀಡಾ ವಸತಿ ನಿಲಯಗಳಲ್ಲಿ (Sports Hostels)ಕ್ರೀಡಾಪಟುಗಳಿಗೆ ಜಾಗತಿಕ ಮಟ್ಟದ ತಂತ್ರಜ್ಞಾನ ಆಧಾರಿತ ತರಬೇತಿ, ವಿಶ್ಲೇಷಣಾ ಸೌಲಭ್ಯಗಳು ಹಾಗೂ ಸುಧಾರಿತ ಕ್ರೀಡಾ ಉಪಕರಣಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ರಾಜ್ಯದ ಕ್ರೀಡಾ ಅಕಾಡೆಮಿಗಳು ಹಾಗು ಕ್ರೀಡಾ ವಸತಿ ನಿಲಯಗಳಲ್ಲಿ (Sports Hostels)ಕ್ರೀಡಾಪಟುಗಳಿಗೆ ಜಾಗತಿಕ ಮಟ್ಟದ ತಂತ್ರಜ್ಞಾನ ಆಧಾರಿತ ತರಬೇತಿ, ವಿಶ್ಲೇಷಣಾ ಸೌಲಭ್ಯಗಳು ಹಾಗೂ ಸುಧಾರಿತ ಕ್ರೀಡಾ ಉಪಕರಣಗಳನ್ನು ಒದಗಿಸಲು ಸರ್ಕಾರ ಕೆಳಕಂಡಂತೆ ಕ್ರಮವಹಿಸಿದೆ:<br><br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧೀನದಲ್ಲಿ ರಾಜ್ಯದಾದ್ಯಂತ ಒಟ್ಟು 32 ಕ್ರೀಡಾ ವಸತಿ ನಿಲಯಗಳು ಹಾಗೂ 02 ಕ್ರೀಡಾ ಶಾಲೆ ಕಾರ್ಯನಿರ್ವಹಿಸುತ್ತಿದ್ದು, 2026-27ನೇ ಸಾಲಿನಲ್ಲಿ ಒಟ್ಟು 2531 ಕ್ರೀಡಾಪಟುಗಳು ಪ್ರವೇಶ ಪಡೆದಿರುತ್ತಾರೆ.<br><br>ಬೆಂಗಳೂರು ಹಾಗೂ ಮೈಸೂರಿನಲ್ಲಿ ಸುಸಜ್ಜಿತ ಕ್ರೀಡಾ ವಿಜ್ಞಾನ ಕೇಂದ್ರಗಳನ್ನು ಆರಂಭಿಸಲಾಗಿದ್ದು, ಬೆಳಗಾವಿಯಲ್ಲಿ ಕ್ರೀಡಾ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ. 2026-27 ನೇ ಸಾಲಿನಲ್ಲಿ ಕಲ್ಬುರ್ಗಿಯಲ್ಲಿ ಹೊಸ ಕ್ರೀಡಾ ವಿಜ್ಞಾನ ಕೇಂದ್ರವನ್ನು ಆರಂಭಿಸಲು ಉದ್ದೇಶಿಸಲಾಗಿದೆ. ಕ್ರೀಡಾ ವಸತಿ ನಿಲಯಗಳಲ್ಲಿ ಪ್ರವೇಶ ಪಡೆಯುವ ಕ್ರೀಡಾಪಟುಗಳಿಗೆ ಕ್ರೀಡಾ ವಿಜ್ಞಾನ ಕೇಂದ್ರಗಳ ಮೂಲಕ ಜಾಗತಿಕ ಮಟ್ಟದ ತಂತ್ರಜ್ಞಾನ ಆಧಾರಿತ ತರಬೇತಿ, ವಿಶ್ಲೇಷಣಾ ಸೌಲಭ್ಯಗಳು ಹಾಗೂ ಸುಧಾರಿತ ಕ್ರೀಡಾ ಉಪಕರಣಗಳನ್ನು ಒದಗಿಸಲಾಗುವುದು. |
| ಈ | ಕ್ರೀಡಾಕೂಟಗಳಲ್ಲಿ ತಂತ್ರಜ್ಞಾನದ ನೆರವಿನಿಂದ ಉಂಟಾಗಬಹುದಾದ ಅಸಮಾನತೆಯನ್ನು<br>ಹೋಗಲಾಡಿಸಲು ಮತ್ತು ರಾಜ್ಯದ ಉದಯೋನ್ಮುಖ ಕ್ರೀಡಾಪಟುಗಳಿಗೆ ಆಧುನಿಕ ಮೂಲಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು?(ವಿವರ ನೀಡುವುದು). | ಕ್ರೀಡಾಕೂಟಗಳಲ್ಲಿ ತಂತ್ರಜ್ಞಾನದ ನೆರವಿನಿಂದ ಉಂಟಾಗಬಹುದಾದ ಅಸಮಾನತೆಯನ್ನು ಹೋಗಲಾಡಿಸಲು ಮತ್ತು ರಾಜ್ಯದ ಉದಯೋನ್ಮುಖ ಕ್ರೀಡಾಪಟುಗಳಿಗೆ ಆಧುನಿಕ ಮೂಲಸೌಕರ್ಯಗಳನ್ನು ಕಲ್ಪಿಸಲು ಪ್ರಸ್ತುತ ಸಾಲಿನ ಕ್ರಿಯಾ ಯೋಜನೆಯಲ್ಲಿ ರೂ. 200.00 ಲಕ್ಷಗಳನ್ನು ಹಂಚಿಕೆ ಮಾಡಿಕೊಳ್ಳಲಾಗಿದೆ. ಅದರಂತೆ, ಆಧುನಿಕ ಕ್ರೀಡಾ ವಿಜ್ಞಾನ ಉಪಕರಣಗಳ ಪೂರೈಕೆ ಮತ್ತು ಅಳವಡಿಕೆಗೆ ಹಾಗೂ ತಾಂತ್ರಿಕ ಉಪಕರಣಗಳ ಸಾಫ್ಟ್‌ವೇರ್ ಸೇವೆ ಪಡೆಯಲು ಕ್ರಮ ವಹಿಸಲಾಗುತ್ತಿದೆ. |

ವೈಎಸ್‌ಡಿ-ಸಿಡಿಎನ್/396/2026

**(ಡಾ. ಜಿ.ಪರಮೇಶ್ವರ)**

ಉಪ ಮುಖ್ಯಮಂತ್ರಿ

—